**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**O.S. No. 271/2020**

| | | |
|---|---|---|
| ಸಾಕ್ಷಿದಾರರ ಹೆಸರು | : | ಗಣೇಶ |
| ತಂದೆಯ ಹೆಸರು | : | ಸುಬ್ಬೇಗೌಡ |
| ವಯಸ್ಸು | : | 59 ವರ್ಷ |
| ಉದ್ಯೋಗ | : | ವ್ಯವಸಾಯ ಮತ್ತು ವ್ಯಾಪಾರ |
| ವಾಸಸ್ಥಳ | : | ಕೆಂಪಿಸಿದ್ದನಹುಂಡಿ, ನಂಜನಗೂಡು ತಾ. |

**ಸಾಕ್ಷಿಯನ್ನು ದಿನಾಂಕಃ 24.02.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಹೆಚ್.ಪಿ.ಎನ್, ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬಾಬ್ತು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿನಾಂಕ 17.10.2017 ರಂದು ಪ್ರತಿವಾದಿಗಳು ಬರೆದುಕೊಟ್ಟಿರುವ ಬೇಡಿಕೆ ವಚನ ಪತ್ರ ಮತ್ತು ಹಣ ಸಂದಾಯ ರಸೀದಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.-1 ಎಂದು ಗುರುತಿಸಲಾಯಿತು.

ನಿ.ಪಿ.-1 ಕ್ಕೆ ಪ್ರತಿವಾದಿಗಳು ಮತ್ತು ಸಾಕ್ಷಿದಾರರಾಗಿ ಹೊಂಬಯ್ಯ ಮತ್ತು ಸಿದ್ದು ಎಂಬುವವರು ಸಹಿ ಮಾಡಿದ್ದು, ಅವರ ಸಹಿಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ಪ್ರತಿವಾದಿಗಳ 6 ಸಹಿಗಳು ಮತ್ತು ಸಾಕ್ಷಿದಾರರ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಪ್ರತಿವಾದಿಗಳ 6 ಸಹಿಗಳನ್ನು ಕ್ರಮವಾಗಿ ನಿ.ಪಿ.-1(ಎ) ರಿಂದ (ಎಫ್) ಎಂದು, ಸಾಕ್ಷಿದಾರರ

ಸಹಿಗಳನ್ನು ಕ್ರಮವಾಗಿ ನಿ.ಪಿ.–1(ಜಿ) ರಿಂದ (ಜೆ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರಿದ ಮುಖ್ಯ ವಿಚಾರಣೆಗಾಗಿ ಸಮಯ ಕೋರಿರುತ್ತಾರೆ, ಸಮಯ ನೀಡಲಾಯಿತು.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

ಪ್ರಧಾನ **ಸಿವಿಲ್ ನ್ಯಾಯಾಧೀಶರು ಮತ್ತು** ಪ್ರ.ದ.ನ್ಯಾ.ದಂ,

**ನಂಜನಗೂಡು.**